ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018–19 :** **ದಿನಾಂಕ : 17–09–2018**

# ಪತ್ರಿಕಾ ಆಮಂತ್ರಣ

1. ವಿಶ್ವ ಬಿದಿರು ದಿನಾಚರಣೆ – 2018
ಪುನರ್ ರಚಿತ ರಾಷ್ಟ್ರೀಯ ಬಿದಿರು ಮಿಷನ್, ನದಿಗಳ ಸಂರಕ್ಷಣಾ ಯೋಜನೆ ಮತ್ತು ಬಿದಿರು ಅಭಿವೃದ್ಧಿ ಕಾರ್ಯಾಗಾರದ ಉದ್ಘಾಟನೆ:

ಆರ್. ಶಂಕರ್, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು,

ಬಿದಿರು ಉತ್ಪನ್ನಗಳ ವಸ್ತು ಪ್ರದರ್ಶನ ಉದ್ಘಾಟನೆ:
ಎಂ.ಸಿ. ಮನಗೋಳಿ, ತೋಟಗಾರಿಕಾ ಸಚಿವರು.

ಅಧ್ಯಕ್ಷತೆ:–
ಡಾ. ಸಿ.ಎನ್. ಅಶ್ವಥ್ ನಾರಾಯಣ, ಶಾಸಕರು, ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರ,

ಮುಖ್ಯ ಅತಿಥಿ:
ಡಿ.ವಿ. ಸದಾನಂದ ಗೌಡ, ಕೇಂದ್ರದ ಅಂಕಿಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವರು.

ದಿನಾಂಕ: 18–09–2018, ಮಂಗಳವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ
ಸ್ಥಳ: 8ನೇ ಮಹಡಿ ಸಭಾಂಗಣ, ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003.

2. ವಿಶ್ವ ಬಿದಿರು ದಿನಾಚರಣೆ – 2018
ಪುನರ್ ರಚಿತ ರಾಷ್ಟ್ರೀಯ ಬಿದಿರು ಮಿಷನ್, ನದಿಗಳ ಸಂರಕ್ಷಣಾ ಯೋಜನೆ ಮತ್ತು ಬಿದಿರು ಅಭಿವೃದ್ಧಿ ಕಾರ್ಯಾಗಾರದ ಸಮಾರೋಪ ಸಮಾರಂಭ

ಘನ ಉಪಸ್ಥಿತಿ:
ಎನ್. ಹೆಚ್. ಶಿವಶಂಕರ್ ರೆಡ್ಡಿ, ಕೃಷಿ ಸಚಿವರು.

ದಿನಾಂಕ: 18-09-2018, ಮಂಗಳವಾರ, ಸಮಯ: ಮಧ್ಯಾಹ್ನ 3.30 ಗಂಟೆಗೆ
ಸ್ಥಳ: 8ನೇ ಮಹಡಿ ಸಭಾಂಗಣ, ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 003.

3. 28ನೇ ದಕ್ಷಿಣ ವಲಯ ಪರಿಷತ್ ಸಭೆ:
ಪ್ರಾಯೋಜಕರು : ಕರ್ನಾಟಕ ಸರ್ಕಾರ

ದಿನಾಂಕ: 18-09-2018, ಮಂಗಳವಾರ, ಸಮಯ: ಅಪರಾಹ್ನ 12.30 ಗಂಟೆಗೆ
ಸ್ಥಳ: ಕೊಠಡಿ ಸಂಖ್ಯೆ: 334, ಸಮ್ಮೇಳನ ಸಭಾಂಗಣ, ವಿಧಾನಸೌಧ, ಬೆಂಗಳೂರು.

ವಿ.ಸೂ: ಕಾರ್ಯಕ್ರಮದ ಉದ್ಘಾಟನೆಯ ಸಮಾರಂಭದ ಮೊದಲ ಮೂರು ನಿಮಿಷಗಳು ಛಾಯಾಚಿತ್ರ ಹಾಗೂ ವೀಡಿಯೋ ಚಿತ್ರೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ.

**ಸಂಖ್ಯೆ:999/1099**

# ಪತ್ರಿಕಾ ಪ್ರಕಟಣೆ

## ಭೂಪರಿವರ್ತನೆ ಪ್ರಕ್ರಿಯೆ ಸರಳ

**ಕಂದಾಯ ಸಚಿವ ಆರ್ ವಿ ದೇಶಪಾಂಡೆ**

**ಬೆಂಗಳೂರು, ಸೆ.17, 2018–** ಭೂಪರಿವರ್ತನೆಗೆ ಸಂಬಂಧಿಸಿದಂತೆ ಸ್ಥಳೀಯ ಅಧಿಕಾರಿಗಳ ವಿರುದ್ಧ ಭೂಮಾಲೀಕರಿಂದ ವ್ಯಾಪಕವಾಗಿ ದೂರುಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ಭೂಪರಿವರ್ತನೆ ಪ್ರಕ್ರಿಯೆಯನ್ನು ಸರಳಗೊಳಿಸಲು ರಾಜ್ಯ ಸರ್ಕಾರ ತೀರ್ಮಾನಿಸಿದೆ ಎಂದು ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಆರ್.ವಿ.ದೇಶಪಾಂಡೆ ಹೇಳಿದ್ದಾರೆ.

ವಿಧಾನಸೌಧದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಈ ಪರಿವರ್ತನೆ ಪ್ರಕ್ರಿಯೆಯು ಸುಗಮವಾಗಿ ಮತ್ತು ತ್ವರಿತವಾಗಿ ನಡೆಯಲು ಅನುಕೂಲವಾಗುವಂತೆ 1964ರ ಕರ್ನಾಟಕ ಭೂಕಂದಾಯ ಕಾಯ್ದೆಯ ಕಲಂ 95ಕ್ಕೆ ಸೂಕ್ತ ತಿದ್ದುಪಡಿಯನ್ನು ಈಗಾಗಲೇ ತರಲಾಗಿದ್ದು, ಈ ಬಗ್ಗೆ ಅಗತ್ಯ ತಂತ್ರಾಂಶವನ್ನು (ಸಾಫ್ಟ್‌ವೇರ್) ಕೂಡ ಅಭಿವೃದ್ಧಿ ಪಡಿಸಲಾಗಿದೆ ಹಾಗೂ ಈ ನಿಟ್ಟಿನಲ್ಲಿ ಪರಿಭಾವಿತ

ಪರಿವರ್ತನೆ (ಡೀಮ್ಡ್ ಕನ್ವರ್ಷನ್) ಎಂಬ ಸರಳವಾದ ಪ್ರಕ್ರಿಯೆಯನ್ನು ಇತ್ತೀಚೆಗೆ ಜಾರಿಗೊಳಿಸಲಾಗಿದೆ," ಎಂದು ವಿವರಿಸಿದರು.

ಹೊಸ ನಿಯಮದ ಪ್ರಕಾರ, ಸರಳೀಕೃತ ಭೂಪರಿವರ್ತನೆ ಪ್ರಕ್ರಿಯೆಯು ಕೆಳಕಂಡ ಹಂತಗಳನ್ನು ಒಳಗೊಂಡಿರುತ್ತದೆ :

- ಅರ್ಜಿದಾರನು ಮೊದಲಿಗೆ ಸಂಬಂಧಪಟ್ಟ ಜಮೀನಿನ ಸರ್ವೆ ನಂ. ಮತ್ತು ಅಗತ್ಯ ವಿವರಗಳನ್ನೊಳಗೊಂಡ ಮನವಿ ಸಲ್ಲಿಸಬೇಕು.
- ನಂತರ, ಅರ್ಜಿದಾರನು ಪ್ರಮಾಣಪತ್ರದೊಂದಿಗೆ ಮನವಿ ಪತ್ರವನ್ನು ಸಲ್ಲಿಸಬೇಕು.
- ಅರ್ಜಿದಾರನು ಮನವಿಯೊಂದಿಗೆ ಈ ಕೆಳಕಂಡ ಪ್ರಕರಣಗಳಲ್ಲಿ 11ಇ ನಕ್ಷೆಯನ್ನು ಸಲ್ಲಿಸಬೇಕು.
    1. ಮನವಿಯು ಭಾಗಶ: ಭೂಪರಿವರ್ತನೆಗೆ ಸಂಬಂಧಿಸಿದ್ದಲ್ಲಿ
    2. ಪಹಣಿಯಲ್ಲಿ ಒಬ್ಬರಿಗಿಂತ ಹೆಚ್ಚು ಖಾತೆದಾರರ ಹೆಸರು ನಮೂದಾಗಿದ್ದಲ್ಲಿ
    3. ಮನವಿಯು 'ಪೈಕಿ ಪಹಣಿಗಳನ್ನು' ಒಳಗೊಂಡಿದ್ದಲ್ಲಿ
- ಬಳಿಕ, ಈ ಮನವಿಯನ್ನು ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಕಳುಹಿಸಲಾಗುವುದು. ಅಲ್ಲಿನ ಅಧಿಕಾರಿಗಳು, ಈ ಮನವಿಯನ್ನು ಪರಿಶೀಲಿಸಿ ಮಹಾಯೋಜನೆಯಂತೆ (ಮಾಸ್ಟರ್ ಪ್ಲಾನ್) ತಮ್ಮ ಅಭಿಪ್ರಾಯವನ್ನು ಸಲ್ಲಿಸುತ್ತಾರೆ.
- ಮುಂದುವರೆದು, ನಗರಾಭಿವೃದ್ಧಿ ಪ್ರಾಧಿಕಾರದಿಂದ ಸ್ವೀಕೃತವಾಗುವ ವರದಿ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ದಾಖಲೆಗಳ ನೈಜತೆಯನ್ನು ಪರಿಶೀಲಿಸಿ ಭೂಪರಿವರ್ತನೆಗೆ ಸಂಬಂಧಿಸಿದ ಶುಲ್ಕ ಮತ್ತು ದಂಡವನ್ನು ನಿಗದಿಪಡಿಸಲಾಗುವುದು.
- ಬಳಿಕ, ಅರ್ಜಿದಾರನು ಆನ್‌ಲೈನ್ ಮೂಲಕ ನಿಗದಿತ ಶುಲ್ಕ ಮತ್ತು ದಂಡವನ್ನು ಪಾವತಿಸಿ, ಈ ಸಂಬಂಧ ಗಣಕೀಕೃತ ತಾತ್ಕಾಲಿಕ ಶುಲ್ಕ ಸ್ವೀಕೃತಿಯ ವಿವರದ ಮಾಹಿತಿಯನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.
- ಜಿಲ್ಲಾಧಿಕಾರಿಗಳು ಡಿಜಿಟಲ್ ಅಂಕಿತದ ಮೂಲಕ ಭೂಪರಿವರ್ತನಾ ಆದೇಶವನ್ನು ಹೊರಡಿಸುವರು.
- ಅಂತಿಮವಾಗಿ ಅರ್ಜಿದಾರನು ಈ ಆದೇಶವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

"ಇದರಂತೆ, ಭೂಪರಿವರ್ತನೆಯು 1961ರ 'ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ'ದಡಿ ಸರ್ಕಾರವು ಪ್ರಕಟಿಸಿರುವ ಮಾಸ್ಟರ್ ಪ್ಲ್ಯಾನ್‌ಗೆ

ಅನುಗುಣವಾಗಿ ಇದ್ದಲ್ಲಿ ಇಂತಹ ಪ್ರಕರಣಗಳನ್ನು ಪರಿಭಾವಿತ ಭೂ ಪರಿವರ್ತನೆ (ಡೀಮ್ಡ್ ಕನ್ವರ್ಷನ್) ಎಂದು ಪರಿಗಣಿಸಲಾಗುತ್ತದೆ ಎಂದು ಕಂದಾಯ ಸಚಿವರು ವಿವರಿಸಿದರು.

ಜೊತೆಗೆ, ಪರಿವರ್ತನೆಗೆ ಒಳಪಡುವ ಜಮೀನು ಸ್ಥಳೀಯ ಯೋಜನಾ ಪ್ರದೇಶದ ಒಳಗಿದ್ದು, ಪ್ರಸ್ತಾಪಿತ ಭೂ ಪರಿವರ್ತನೆಯ ಉದ್ದೇಶವು ಮೇಲ್ಕಂಡ ಅಧಿನಿಯಮದ ಉಪಬಂಧದಡಿ ಪ್ರಕಟಪಡಿಸಿದ ಮಾಸ್ಟರ್ ಪ್ಲ್ಯಾನ್ (ಮಹಾಯೋಜನೆ ನಕ್ಷೆ)ನಲ್ಲಿ ನಿರ್ದಿಷ್ಟಪಡಿಸಿದ ಉದ್ದೇಶಕ್ಕೆ ಅನುಗುಣವಾಗಿಯೂ ಇರಬೇಕು ಎಂದು ದೇಶಪಾಂಡೆ ವಿವರಿಸಿದರು.

ಈ ಸೂಚನೆಯನ್ನು ಎಲ್ಲ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಾಗಿ ಪಾಲಿಸಲು ಸುತ್ತೋಲೆ ಹೊರಡಿಸಲಾಗಿದೆ ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

## Master Plan based Deemed Conversion

Bengaluru, Sep 17, 2018 – The State Government has decided to simplify the process of land conversion in the wake of persistent complaints from the land owners about the local authorities, the Revenue & Skill Development Minister, R.V.Deshpande said here today.

Addressing the press conference in Vidhana Soudha today he explained, ``that the State Government has already amended Section 95 of the Karnataka Land Revenue Act of 1964 in this regard. In addition to this, the Government has developed a necessary software and simplified the process called 'Deemed Conversion'.

Under the simplified new procedure, the following stages are required to be followed :

- The applicant shall submit a request through online regarding the details of land along with survey number.
- Applicant has to submit an Affidavit along with the application.
- Along with the application, the applicant has to submit 11E sketch for the following cases :
  A) If the request is for partial conversion
  B) If the RTC consists of multiple owners.
  C) In case of Pyki RTCs.

- In other cases, there is no necessity of submitting 11E sketches along with the application.

- Then, the request shall be forwarded to UDA's. Officials from the UDA verifies the requests for the presence of land in the Master Plan and the purposes as per the existing Master Plan.

- Once the report has been obtained from UDA, the concerned official will verify the correctness of the application and the applicant will be informed to pay the necessary fees and fine through online - K2 software and downloads the interim system generated Order of payment.

- The Deputy Commissioner's shall digitally sign the Conversion Order.

- Finally, the landlord shall download/print the digitally signed Conversion Order.

The Minister said, Once a Development Plan for a city is notified by the Government, it becomes permissible for land owners in such areas to use the land as per provisions of this plan and the corresponding development control regulations.

According to this, if the proposed land conversion is in accordance with the Master Plan, published under the `Karnataka town and country planning Act' of 1961, then such cases can be considered as Deemed Conversion, the Minister elaborated.

``the proposed land must be falling under Local Planning Area and the purpose of the conversion also suit the explanation or definition of the Master Plan. And it is subject to the payment of fine prescribed under sub-section (7).''

The state government has already instructed all the DC's to follow this procedure strictly and regarding this the circular has been issued, he informed.

## ವಿವಿಧ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ಸೆ 17 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಪ್ರಸಕ್ತ 2018-19ನೇ ಶೈಕ್ಷಣಿಕ ಸಾಲಿಗೆ ವಿಶ್ವವಿದ್ಯಾನಿಲಯವು ನೀಡುತ್ತಿರುವ ಶಿಕ್ಷಣ ಕ್ರಮಗಳ ಮೇರೆಗೆ ಯು.ಜಿ.ಸಿಯು 2018-19 ರಿಂದ 2022-23 ರವರೆಗೂ ಮಾನ್ಯತೆ ನೀಡಿರುವ ಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳಾದ ಪ್ರಥಮ ಬಿ.ಎ./ಬಿ.ಕಾಂ, ಎಂಎ/ಎಂ.ಕಾಂ., ಬಿ.ಲಿಬ್‌ಐ.ಎಸ್ಸಿ, ಎಂ.ಲಿಬ್‌ಐ.ಎಸ್ಸಿ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ/(ಎಂ.ಸಿ.ಜೆ) ಹಾಗೂ ಎಂ.ಎಸ್ಸಿ (ಪರಿಸರ ವಿಜ್ಞಾನ) ಕೋರ್ಸ್‌ಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ದಂಡ ಶುಲ್ಕವಿಲ್ಲದೆ ಪ್ರಥಮ ವರ್ಷದ ಮೇಲ್ಕಂಡ ಕೋರ್ಸ್‌ಗಳಿಗೆ 20-09-2018 ಕೊನೆಯ ದಿನ ಹಾಗೂ 200 ರೂ. ದಂಡ ಶುಲ್ಕದೊಂದಿಗೆ 01-10-2018 ರಂದು ಅಂತಿಮ ದಿನಾಂಕವಾಗಿರುತ್ತದೆ.

ಬಿ.ಎ./ಬಿಕಾಂ ಪದವಿಗೆ ಪ್ರವೇಶಾಇ ಶುಲ್ಕ ರೂ 4600/- ಹಾಗೂ ಎಂ.ಎ./ಎಂ.ಕಾಂ. ಪದವಿಗೆ ಪ್ರವೇಶಾತಿ ಶುಲ್ಕ ರೂ 6100/- ಗಳಾಗಿರುತ್ತದೆ. ಪ್ರವೇಶಾತಿ ಹೊಂದಿದ ವಿದ್ಯಾರ್ಥಿಗಳಿಗೆ ಸ್ಥಳದಲ್ಲಿಯೇ ಸಿದ್ಧಪಾಠಗಳು ಹಾಗೂ ಗುರುತಿನ ಚೀಟಿಯನ್ನು ನೀಡಲಾಗುವುದು. ಅರ್ಹ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ www.ksoumysore.karnataka.gov.in ನಿಂದ ಅರ್ಜಿ, ವಿವರಣಾ ಪುಸ್ತಕ ಹಾಗೂ ಶುಲ್ಕ ಪಾವತಿಸುವ ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕದಲ್ಲಿ ಮಾತ್ರ ಶೇಕಡ 25 ರಷ್ಟು ವಿನಾಯಿತಿ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಅಗತ್ಯ ದಾಖಲೆಗಳನ್ನು ಒದಗಿಸಿದಲ್ಲಿ ಪ್ರವೇಶಾತಿ ಶುಲ್ಕದಲ್ಲಿ ವಿನಾಯಿತಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ, ನಂ 61, 5ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಚಾಮರಾಜಪೇಟೆ, ಬೆಂಗಳೂರು – 560 018 ಕಚೇರಿ ದೂರವಾಣಿ ಸಂಖ್ಯೆ 080-26603664, ಮೊಬೈಲ್ ಸಂಖ್ಯೆ : 9448668880 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿದ್ಯಾನಿಲಯದ ಪ್ರಕಟಣೆ ತಿಳಿಸಿದೆ.

## ಬಿ.ಪಿ.ಎಲ್. ಕುಟುಂಬಗಳ ಮರು ಪಾವತಿ ಸಾಲ ಮನ್ನಾ ಸಮೀಕ್ಷೆ

ಬೆಂಗಳೂರು, ಸೆ 17 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯಿಂದ ಸಾಲ ಪಡೆದಿರುವ ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಫಲಾನುಭವಿಗಳ ಕುಟುಂಬಗಳ ಮಾಹಿತಿ ಸಮೀಕ್ಷೆಯನ್ನು ನಡೆಸಲಾಗುತ್ತಿದೆ.

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮೂಲಕ ಧನಸಹಾಯ ಸ್ವರೂಪ ಯೋಜನೆ (ಪಿ.ಬಿ.ಎಸ್) ಮತ್ತು ಸಮೂಹ ಬ್ಯಾಂಕ್ ಯೋಜನೆ (ಸಿಬಿಸಿ) ಯಡಿ ಸಾಲ ಪಡೆದಿರುವ ಎಲ್ಲಾ ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಕುಟುಂಬಗಳ ಸಾಲ ಮರು ಪಾವತಿಗಾಗಿ ಬಾಕಿ ಇರುವ ಸಾಲವನ್ನು ಮನ್ನಾ ಮಾಡುವ ನಿಟ್ಟಿನಲ್ಲಿ ಈ ಕಾರ್ಯ ನಡೆಯುತ್ತದೆ.

ಯೋಜನೆಯನ್ನು ಜಾರಿಗೆ ತರಲು ಖಾದಿ ಮಂಡಳಿಯಿಂದ ಪಿ.ಬಿ.ಎಸ್. ಮತ್ತು ಸಿ.ಬಿ.ಸಿ. ಯೋಜನೆಯಡಿ ಹಾಗೂ ತಾಲ್ಲೂಕು ಮಟ್ಟದ ವಿವಿದ್ದೋದೇಶ ಸಹಕಾರ ಸಂಘಗಳ ಮೂಲಕ ಸಾಲ ಸೌಲಭ್ಯ ಪಡೆದಿರುವ ಬಿ.ಪಿ.ಎಲ್. ಫಲಾನುಭವಿಗಳ ಕುಟುಂಬಗಳ ವಿವರವನ್ನು ಸಮೀಕ್ಷೆ ಮಾಡಲಾಗುತ್ತಿದ್ದು, ಸರ್ಕಾರವು ಒಂದು ತಿಂಗಳೊಳಗಾಗಿ ಫಲಾನುಭವಿಗಳ ಯಾದಿಯನ್ನು ಸಲ್ಲಿಸಲು ಸೂಚಿಸಿದೆ.

ಅದರಂತೆ ಖಾದಿ ಮಂಡಳಿಯ ಮೂಲಕ ಧನ ಸಹಾಯ ಸ್ವರೂಪ ಮತ್ತು ಸಮೂಹ ಬ್ಯಾಂಕ್ ಯೋಜನೆಯಡಿ ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಫಲಾನುಭವಿಗಳು ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ನಗರ ಜಿಲ್ಲೆ, ಜಿಲ್ಲಾ ಕಚೇರಿ, ನಂ. 10, ಜಸ್ಮಾ ಭವನ ರಸ್ತೆ, ಖಾದಿ ಮಂಡಳಿ, ಬೆಂಗಳೂರು – 560 002 ಇವರನ್ನು (ದೂರವಾಣಿ ಸಂಖ್ಯೆ: 080–22643431, ಮೊಬೈಲ್ ಸಂಖ್ಯೆ: 9480825611) ಹಾಗೂ ಸಂಪರ್ಕಿಸಿ ಅಧಿಕೃತ ಹಾಗೂ ದೃಡೀಕೃತ ದಾಖಲಾತಿಗಳನ್ನು ಒದಗಿಸುವಂತೆ ಜಿಲ್ಲಾ ಖಾದಿ ಗ್ರಾಮೋದ್ಯೋಗ ಅಧಿಕಾರಿ, ಬೆಂಗಳೂರು ನಗರ ಜಿಲ್ಲೆ ಇವರಿಂದ ಮಾಹಿತಿ ಪಡೆಯಬಹುದಾಗಿದೆ.

## ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್
## 100ನೇ ರಾಜ್ಯ ಪರಿಷತ್ ಸಾಮಾನ್ಯ ಮಹಾಸಭೆ

ಬೆಂಗಳೂರು, ಸೆ 17 (ಕರ್ನಾಟಕ ವಾರ್ತೆ)

ರಾಜ್ಯದ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ 100 ನೇ ರಾಜ್ಯ ಪರಿಷತ್ ಸಾಮಾನ್ಯ ಸಭೆಯು ಸೆಪ್ಟೆಂಬರ್ 19ರ ಬುಧವಾರದಂದು ನಗರದ ಅರಮನೆ ರಸ್ತೆಯಲ್ಲಿರುವ ಕೊಂಡಜ್ಜಿ ಬಸಪ್ಪ ಸಭಾಂಗಣದಲ್ಲಿ ಬೆಳಿಗ್ಗೆ 11.30 ಗಂಟೆಗೆ ನಡೆಯಲಿದೆ.

ಈ ಸಭೆಯ ಅಧ್ಯಕ್ಷತೆಯನ್ನು ಮುಖ್ಯಮಂತ್ರಿ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಅಧ್ಯಕ್ಷರೂ ಆದ ಹೆಚ್.ಡಿ. ಕುಮಾರಸ್ವಾಮಿ ಅವರು ವಹಿಸಲಿದ್ದಾರೆ.

ಮೈಸೂರಿನ ಮಹಾರಾಣಿ ರಾಜಮಾತೆ ಡಾ. ಪ್ರಮೋದ ದೇವಿ ಒಡೆಯರ್ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಉಪ ಪೋಷಕರು, ನವದೆಹಲಿಯ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ರಾಷ್ಟ್ರೀಯ ಆಯುಕ್ತ ಡಾ. ಕೆ.ಕೆ. ಖಂಡೇಲ್‌ವಾಲ್ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯ ಅವರು ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಬಿಬಿಎಂಪಿ **ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಭವನ ಕಟ್ಟಡದ ನಿರ್ಮಾಣದ ಶಂಕುಸ್ಥಾಪನೆ ಕಾರ್ಯವನ್ನು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಉಪಸ್ಥಿತರಿರುವರು.**

**ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಆರ್. ಸಂಪತ್‌ರಾಜ್, ಮಹಾಪೌರರು ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಪೋಷಕರು, ಬಿಬಿಎಂಪಿ ಜಿಲ್ಲಾ ಸಂಸ್ಥೆ. ಅವರು ವಹಿಸಲಿದ್ದಾರೆ.**